ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ಸೆಪ್ಟೆಂಬರ್ 15, 2015

**ಹಿರಿಯ ಪತ್ರಕರ್ತ ಡಾ ಸಿ ಸೀತಾರಾಂ ನಿಧನಕ್ಕೆ**
**ಮುಖ್ಯಮಂತ್ರಿ ಶೋಕ**

**ಬೆಂಗಳೂರು, ಸೆಪ್ಟೆಂಬರ್ 15:**

ಹಿರಿಯ ಪತ್ರಕರ್ತ ಹಾಗೂ ಕನ್ನಡ ಚಲನಚಿತ್ರ ಪತ್ರಿಕೋದ್ಯಮದ ದಿಗ್ಗಜ ಡಾ ಚಪ್ಪಲ್ಲಿ ಸೀತಾರಾಂ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಕನ್ನಡದ ಸಿನಿ ಸಾಪ್ತಾಹಿಕ *ಮೇನಕ* ಪತ್ರಿಕೆಯಿಂದ ತಮ್ಮ ವೃತ್ತಿ ಜೀವನವನ್ನು ಪ್ರಾರಂಭಿಸಿ ಕನ್ನಡ ಪ್ರಭ ಪತ್ರಿಕೆಯ ಸಿನಿಮಾ ಪುರವಣಿಗೆ ಕಾಯಕಲ್ಪ ನೀಡಿ ಎಲ್ಲರ ಮೆಚ್ಚುಗೆ ಗಳಿಸಿದ ಡಾ ಸೀತಾರಾಂ ಅವರು ತಮ್ಮ ನೇರ ಮತ್ತು ನಿಷ್ಠೂರ ಬರವಣಿಗೆಗೆ ಮತ್ತೊಂದು ಹೆಸರಾಗಿದ್ದರು. ಆ ಕಾಲದಲ್ಲಿ ಕನ್ನಡ ಪ್ರಭ ಪತ್ರಿಕೆಯಲ್ಲಿನ ಡಾ ಸೀತಾರಾಂ ಅವರ ಚಿತ್ರ ವಿಮರ್ಶೆಯ ಅಂಕಣವನ್ನು ಇಡೀ ಗಾಂಧೀನಗರವೇ ಎದುರು ನೋಡುತ್ತಿತ್ತು ! ಮೇಲ್ನೋಟಕ್ಕೆ ಗಂಭೀರ ಸ್ವಭಾವದಂತೆ ಕಂಡರೂ, ಡಾ ಸೀತಾರಾಂ ಅವರು ಹಲವು ಹಾಸ್ಯ ಲೇಖನಗಳನ್ನು ಬರೆದಿದ್ದಾರೆ ಎಂಬುದು ಸೋಜಿಗದ ಸಂಗತಿ. ಕನ್ನಡ ಚಲನಚಿತ್ರ ರಂಗದ ಎಲ್ಲಾ ಕಲಾವಿದರು ಹಾಗೂ ತಂತ್ರಜ್ಞರ ಬಗ್ಗೆ ಅಪಾರ ಮಾಹಿತಿ ಹೊಂದಿ ನಡೆದಾಡುವ ವಿಶ್ವಕೋಶ ಎಂದೆನಿಸಿದ್ದ ಡಾ ಸೀತಾರಾಂ ಅವರು ಚಲನಚಿತ್ರ ಸಂಬಂಧೀ ಹಲವು ಮೌಲಿಕ ಪುಸ್ತಕಗಳನ್ನೂ ಹೊರತಂದಿದ್ದಾರೆ ಎಂದು ಮುಖ್ಯಮಂತ್ರಿ ಬಣ್ಣಿಸಿದ್ದಾರೆ.

ಕರ್ನಾಟಕ ಚಲನಚಿತ್ರ ಪತ್ರಕರ್ತರ ಪರಿಷತ್‌ನ ಅಧ್ಯಕ್ಷರೂ ಆಗಿ ಸೇವೆ ಸಲ್ಲಿಸಿದ್ದ ಡಾ ಸೀತಾರಾಂ ಅವರು ಮಲ್ಲೇಶ್ವರಂ ಬಡಾವಣೆಯಲ್ಲಿ ಶತಮಾನ ಕಂಡ ತಮ್ಮ ಮನೆಯನ್ನು ತಾವು ಬದುಕಿರುವವರೆಗೂ ಉಳಿಸಿಕೊಳ್ಳುತ್ತೇನೆ ಎಂದು ತಮ್ಮ ಆಪ್ತ ವಲಯದಲ್ಲಿ ಸದಾ ಹೇಳುತ್ತಿದ್ದರು. ಅಂತೆಯೇ, ನುಡಿದಂತೆ ನಡೆದರು ಎಂದು ಶ್ರೀ ಸಿದ್ದರಾಮಯ್ಯ ಅವರು ಸ್ಮರಿಸಿದ್ದಾರೆ.

*************

**ಡಿ ಪಿ ಎಂ**